## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ಐ.ಸಿ.ಸೋಮವಾರದ, ಶಾಖಾಧಿಕಾರಿ, ಅಧೀಕ್ಷಕ ಇಂಜಿನಿಯರ್‌ರವರ ಕಚೇರಿ, ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತ, ಧಾರವಾಡ ಇವರ ವಿರುದ್ಧ ಶಿಸ್ತು ಕ್ರಮ – ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತ-1 ರವರಿಗೆ ವಹಿಸುವ ಬಗ್ಗೆ - ಆದೇಶ.

ಓದಲಾಗಿದೆ:- 1) ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಚೇರಿ, ಬೆಂಗಳೂರು ಇವರ ಅರೆ ಸರ್ಕಾರಿ ಪತ್ರ ಸಂಖ್ಯೆ. Compt/ Uplok/ BGM-8686 /2015/ ARLO-1 ದಿನಾಂಕ. 06.09.2016.

2) ಮಾನ್ಯ ಉಪ ಲೋಕಾಯುಕ್ತ-1ರವರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 12(3)ರಡಿಯಲ್ಲಿ ಸಲ್ಲಿಸಿರುವ ವರದಿ ಸಂಖ್ಯೆ Compt/ Uplok/ BGM-8686 /2015/ ARLO-1 ದಿನಾಂಕ. 01.09.2016.

-----

### ಪ್ರಸ್ತಾವನೆ

ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಚೇರಿ, ಬೆಂಗಳೂರು ರವರು ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ 27.08.2016ರ ಪತ್ರದ ಜೊತೆ ಮಾನ್ಯ ಉಪಲೋಕಾಯುಕ್ತ-1ರವರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಸೆಕ್ಷನ್ 12 (3) ರನ್ವಯ ನೀಡಿರುವ ವರದಿಯನ್ನು ಸಂಬಂಧಿಸಿದ ದಾಖಲೆಗಳೊಂದಿಗೆ ಕಳುಹಿಸುತ್ತಾ, ಮಾನ್ಯ ಉಪ ಲೋಕಾಯುಕ್ತ-1ರವರ ಶಿಫಾರಸ್ಸಿನಂತೆ ಕ್ರಮವಹಿಸಲು ಕೋರಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತ-1ರವರು ಲೋಕಾಯುಕ್ತ ಕಾಯ್ದೆ ಕಲಂ 12 (3)ರಂತೆ ಸಲ್ಲಿಸಿರುವ ವರದಿ ಹಾಗೂ ಲಗತ್ತಿಸಿರುವ ದಾಖಲೆಗಳನ್ನು ಪರಿಶೀಲಿಸಿದೆ. ಶ್ರೀ ಸೋಮಲಿಂಗ ಡಿ. ದುರ್ಗಾಯಿ, ಸಾ//ದೇವಗಿರಿ, ಕಲಕೇರಿ ಅಂಚೆ, ಧಾರವಾಡ ತಾಲ್ಲೂಕು ಮತ್ತು ಜಿಲ್ಲೆ ಇವರು 2014-15ನೇ ಸಾಲಿನಲ್ಲಿ 3054 ಯೋಜನೇತರ ಯೋಜನೆಯಡಿ ಮಂಜೂರಾದ ಕಾಮಗಾರಿಗಳಲ್ಲಿ ಧಾರವಾಡ ತಾಲ್ಲೂಕು ಪಂಚಾಯತಿ ವತಿಯಿಂದ ಕೈಗೊಂಡ ದೇವಗಿರಿ-ವಲತಿಕೋಟಿ ರಸ್ತೆ ವಯಾ ಸೋಮಲಿಂಗನ ಝುರಿ ರಸ್ತೆ ಸುಧಾರಣೆ ಕಾಮಗಾರಿಗೆ ಮಂಜೂರಾದ ಅಂದಾಜಿನಲ್ಲಿನ ಮೊತ್ತಕ್ಕಿಂತ ಹೆಚ್ಚಿನ ಹಣ ಖರ್ಚು ಮಾಡಲಾಗಿದೆಯೆಂದು ಹಾಗೂ ವಿವಿಧ ರಸ್ತೆ ಕಾಮಗಾರಿಗಳನ್ನು ಅನುಷ್ಠಾನಗೊಳಿಸದೇ ಅವ್ಯವಹಾರ ಎಸಗಿರುತ್ತಾರೆಂದು, ಇದಕ್ಕೆ ಶ್ರೀ ಐ.ಸಿ.ಸೋಮವಾರದ, ಸಹಾಯಕ ಇಂಜಿನಿಯರ್ ಇವರು ಜವಾಬ್ದಾರರಾಗಿದ್ದಾರೆಂದು ತಿಳಿಸಿ, ಈ ಬಗ್ಗೆ ತನಿಖೆ ನಡೆಸಬೇಕೆಂದು ಕರ್ನಾಟಕ ಲೋಕಾಯುಕ್ತ ಕಚೇರಿಯಲ್ಲಿ ದೂರನ್ನು ಸಲ್ಲಿಸಿರುತ್ತಾರೆ.

ಸದರಿ ದೂರಿಗೆ ಸಂಬಂಧಿಸಿದಂತೆ ಕರ್ನಾಟಕ ಲೋಕಾಯುಕ್ತ ಕಚೇರಿಯು ತನಿಖೆಯನ್ನು ಕೈಗೊಂಡು ವರದಿ ಸಲ್ಲಿಸಿದ್ದು, ಆದರೆ ಪೂರಕವಾದ ದಾಖಲೆಗಳನ್ನು ಸಲ್ಲಿಸಿರುವುದಿಲ್ಲವೆಂದು ತಿಳಿಸಿರುತ್ತಾರೆ

ಸದರಿ ದೂರು ಹಾಗೂ ತನಿಖಾ ವರದಿಗೆ ಸಂಬಂಧಿಸಿದಂತೆ ಲೋಕಾಯುಕ್ತ ಕಚೇರಿಯು ಶ್ರೀ ಐ.ಸಿ.ಸೋಮವಾರದ, ಸಹಾಯಕ ಇಂಜಿನಿಯರ್ ಇವರಿಂದ ಆಕ್ಷೇಪಣೆಗಳನ್ನು ಕೇಳಲಾಗಿದ್ದು, ಸದರಿಯವರು ಯಾವುದೇ ಆಕ್ಷೇಪಣೆಯನ್ನು ಸಲ್ಲಿಸಿರುವುದಿಲ್ಲವೆಂದು ತಿಳಿಸಿರುತ್ತಾರೆ.

ಮಾನ್ಯ ಉಪ ಲೋಕಾಯುಕ್ತರವರು ತನಿಖಾ ವರದಿ, ಆಪಾದಿತರು ಸಲ್ಲಿಸಿರುವ ಆಕ್ಷೇಪಣೆಗಳು ಮತ್ತು ದಾಖಲಾತಿಗಳನ್ನು ಪರಿಶೀಲಿಸಿದ್ದು, ಧಾರವಾಡ ತಾಲ್ಲೂಕಿನ ವಲತಿಕೋಟಿಯಿಂದ ದೂಪರ್ತಿ ವಾರ್ಡ ರಸ್ತೆ ಸುಧಾರಣೆ ಕಾಮಗಾರಿ, ನಿಗದಿ - ಅಂಬಲಿಕೊಪ್ಪ ಹಳ್ಳಕೇರಿಗೆ ಕೂಡು ರಸ್ತೆ ಸುಧಾರಣೆ ಮತ್ತು ದೇವರಹುಬ್ಬಳ್ಳಿಯಿಂದ ಹಳಿಯಾಳ ಕೂಡು ರಸ್ತೆ ಸುಧಾರಣೆ ಕಾಮಗಾರಿಗಳನ್ನು ಮಾನವ ಸಂಪನ್ಮೂಲದಿಂದ ಮಾಡಲಾಗಿದೆಯೇ ಅಥವಾ ಜೆಸಿಬಿ ಯಂತ್ರದಿಂದ ಮಾಡಲಾಗಿದೆಯೇ ಎಂಬ ಬಗ್ಗೆ ಮಾಹಿತಿಯನ್ನು ನೀಡಿರುವುದಿಲ್ಲವೆಂದು, ಸದರಿ ಕಾಮಗಾರಿಗಳಿಗೆ ಹಣ ಖರ್ಚು ಮಾಡಿರುವ ಬಗ್ಗೆ ವೋಚರ್/ ರಸೀದಿ / ದಾಖಲೆಗಳನ್ನು ಹಾಜರುಪಡಿಸಿರುವುದಿಲ್ಲವೆಂದು ಹಾಗೂ ಕಾಮಗಾರಿಗಳಿಗೆ ಅಗತ್ಯವಿರುವ ಸಾಮಗ್ರಿಗಳನ್ನು ಖರೀದಿಸುವಾಗ ಸಾಧಿಲ್ವಾರು ವೆಚ್ಚದ ಕೈಪಿಡಿ 1958, ನಿಯಮಗಳ ನಿಯಮ 55 (49)(ಎ)ರ ನಿಯಮಗಳನ್ನು ಪಾಲಿಸಿರುವ ಬಗ್ಗೆ ಯಾವುದೇ ದಾಖಲೆಗಳನ್ನು ಹಾಜರುಪಡಿಸಿರುವುದಿಲ್ಲವೆಂದು, ಗುತ್ತಿಗೆದಾರರಿಗೆ ಹಾಗೂ ಸರಬರಾಜುದಾರರಿಗೆ ಹಣ ಪಾವತಿಸಲು ಕೆ.ಟಿ.ಪಿ.ಪಿ. ನಿಯಮಗಳನ್ನು ಪಾಲಿಸಿರುವ ಬಗ್ಗೆ ಯಾವುದೇ ದಾಖಲೆಗಳನ್ನು ಹಾಜರುಪಡಿಸಿರುವುದಿಲ್ಲವೆಂದು, ಹಾಗಾಗಿ ಶ್ರೀ ಐ.ಸಿ.ಸೋಮವಾರದ, ಸಹಾಯಕ ಇಂಜಿನಿಯರ್ ಇವರು ವಿವಿಧ ಕಾಮಗಾರಿಗಳಿಗೆ ಮಂಜೂರಾದ ಒಟ್ಟು ಅನುದಾನ ರೂ. 27.94ಲಕ್ಷಗಳನ್ನು ದುರುಪಯೋಗಪಡಿಸಿಕೊಂಡು ಕರ್ತವ್ಯಲೋಪ ಎಸಗಿರುವುದು ಮೇಲ್ನೋಟಕ್ಕೆ ಕಂಡುಬರುತ್ತದೆಯೆಂದು, ಅಲ್ಲದೆ ಸದರಿ ಆಪಾದಿತ ಅಧಿಕಾರಿಯ ವಿರುದ್ಧದ ನಡವಳಿಕೆಯನ್ನು ಕೈ ಬಿಡಲು ಸೂಕ್ತ / ಸಮಂಜಸ / ಸಮಾಧಾನಕರ ಅಂಶಗಳು ಕಂಡುಬರುತ್ತಿಲ್ಲವೆಂದು, ಸದರಿಯವರು ಸರ್ಕಾರಿ ನೌಕರರಾಗಿ ಪರಿಪೂರ್ಣ ಪ್ರಾಮಾಣಿಕತೆ, ಸಂಪೂರ್ಣ ಕರ್ತವ್ಯ ನಿಷ್ಠೆ ತೋರದೆ, ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ಕರ್ತವ್ಯ ಲೋಪ ಎಸಗಿ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು 1966ರ 3(1)ನ್ನು ಉಲ್ಲಂಘಿಸಿ ದುರ್ನಡತೆಯನ್ನು ಎಸಗಿರುವುದು ಮೇಲ್ನೋಟಕ್ಕೆ ಕಂಡುಬರುವುದರಿಂದ ಇವರ ವಿರುದ್ಧದ ಆರೋಪಗಳ ಬಗ್ಗೆ ಇಲಾಖಾ ವಿಚಾರಣೆ ನಡೆಸುವ ಸಲುವಾಗಿ ಪ್ರಕರಣವನ್ನು ತಮಗೆ ವಹಿಸುವಂತೆ ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಪ್ರಕರಣಕ್ಕೆ ಸಂಬಂಧಿಸಿದ ಎಲ್ಲಾ ಮಾಹಿತಿ ಮತ್ತು ದಾಖಲೆಗಳನ್ನು ಪರಿಶೀಲಿಸಿದೆ. ಪ್ರಕರಣದಲ್ಲಿ ಭಾಗಿಯಾಗಿರುವ ಶ್ರೀ ಐ.ಸಿ.ಸೋಮವಾರದ, ಸಹಾಯಕ ಇಂಜಿನಿಯರ್ ಇವರು ಪ್ರಶ್ನಿತ ಕಾಮಗಾರಿಗಳಿಗೆ ಮಂಜೂರಾದ ಒಟ್ಟು ಅನುದಾನ ರೂ. 27.94ಲಕ್ಷಗಳನ್ನು ದುರುಪಯೋಗಪಡಿಸಿಕೊಂಡಿರುವುದು ದಾಖಲೆಗಳಿಂದ ಕಂಡುಬರುತ್ತದೆ. ಹಾಗಾಗಿ ಸದರಿಯವರು ಸರ್ಕಾರಿ ನೌಕರರಾಗಿ ತಮ್ಮ ಕರ್ತವ್ಯ ನಿರ್ವಹಣೆಯಲ್ಲಿ ಪರಿಪೂರ್ಣ ಪ್ರಾಮಾಣಿಕತೆ ಹಾಗೂ ಸಂಪೂರ್ಣ ನಿಷ್ಠೆ ತೋರದೆ ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು 1966ರ ನಿಯಮ

3(1)ನ್ನು ಉಲ್ಲಂಘಿಸಿ ದುರ್ನಡತೆಯನ್ನು ಎಸಗಿರುವುದು ಮೇಲ್ನೋಟಕ್ಕೆ ಕಂಡುಬರುವುದರಿಂದ ಇವರ ವಿರುದ್ಧದ ಆರೋಪದ ಬಗ್ಗೆ ಇಲಾಖಾ ವಿಚಾರಣೆ ನಡೆಸುವುದು ಅವಶ್ಯವಿರುತ್ತದೆ.

ಆದ್ದರಿಂದ, ಶ್ರೀ ಐ.ಸಿ.ಸೋಮವಾರದ, ಸಹಾಯಕ ಇಂಜಿನಿಯರ್ ಇವರ ವಿರುದ್ಧದ ಆರೋಪಗಳ ಬಗ್ಗೆ ವಿವರವಾದ ಇಲಾಖಾ ವಿಚಾರಣೆ ನಡೆಸಲು ಪ್ರಕರಣವನ್ನು ಮಾನ್ಯ ಉಪ ಲೋಕಾಯುಕ್ತ-1 ರವರಿಗೆ ವಹಿಸಲು ಸರ್ಕಾರವು ತೀರ್ಮಾನಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**ಆದೇಶ ಸಂಖ್ಯೆ : ಗ್ರಾಅಪ 108 ಇಎನ್‌ಕ್ಯೂ 2016 ಬೆಂಗಳೂರು,**
**ದಿನಾಂಕ. 06.10.2016**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಸರ್ಕಾರವು ಶ್ರೀ ಐ.ಸಿ.ಸೋಮವಾರದ, ಅಂದಿನ ಸಹಾಯಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಧಾರವಾಡ (ಹಾಲಿ ಅಧೀಕ್ಷಕ ಇಂಜಿನಿಯರ್‌ರವರ ಕಚೇರಿ, ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತ, ಧಾರವಾಡ) ಇವರ ವಿರುದ್ಧದ ಆರೋಪಗಳ ಬಗ್ಗೆ ವಿವರವಾದ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 11ರಂತೆ ನಡೆಸುವ ಸಲುವಾಗಿ ಪ್ರಕರಣವನ್ನು ಸದರಿ ನಿಯಮಗಳ ನಿಯಮ 14(ಎ)ರ ಅನುಸಾರ ಮಾನ್ಯ ಉಪಲೋಕಾಯುಕ್ತ-1ರವರಿಗೆ ವಹಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಸಿದ್ದೇಶ್ ಪೊತಲಕಟ್ಟಿ)
ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು-ಎ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಇವರಿಗೆ:**

1. ಮಹಾಲೇಖಪಾಲರು, (ಅ ಮತ್ತು ಇ) ಕರ್ನಾಟಕ, ಬೆಂಗಳೂರು.
2. ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಚೇರಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಸರ್ಕಾರದ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ.
4. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
5. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ದಕ್ಷಿಣ), ಬೆಂಗಳೂರು.
6. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಧಾರವಾಡ.
7. ಅಪರ ನಿಬಂಧಕರು ಕಾನೂನು ಅಭಿಪ್ರಾಯ-1, ಕರ್ನಾಟಕ ಲೋಕಾಯುಕ್ತ ಕಚೇರಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
8. ಶ್ರೀ ಐ.ಸಿ.ಸೋಮವಾರದ, ಸಹಾಯಕ ಇಂಜಿನಿಯರ್, ಅಧೀಕ್ಷಕ ಇಂಜಿನಿಯರ್‌ರವರ ಕಚೇರಿ, ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತ, ಧಾರವಾಡ.
9. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.
10. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ (ಸೇವೆಗಳು-ಎ,ಬಿ&ಸಿ).
11. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ / ಜಂಟಿ ಕಾರ್ಯದರ್ಶಿ (ಆಡಳಿತ) ಇವರ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರು.
12. ಹೆಚ್ಚುವರಿ ಪ್ರತಿ : ರಕ್ಷಾ ಕಡತ : ಸೂಚನಾ ಫಲಕ : ಕಂಪ್ಯೂಟರ್ ಸೆಲ್.